**ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ. ಎಂ. ಎಫ್.ಸಿ., ನ್ಯಾಯಾಲಯ ಚನ್ನಪಟ್ಟಣ ಚನ್ನಪಟ್ಟಣ.**

**ಸಿ.ಸಿ. ಸಂಖ್ಯೆ: 388/2023**

ಚಾಸಾ: 1 ಪ್ರಾಸಾ:1

| | | |
|---|---|---|
| ಹೆಸರು | : | ಗುರುಸ್ವಾಮಿ |
| ಗಂಡನ/ತಂದೆಯ ಹೆಸರು | : | ಮೂಡೇಗೌಡ |
| ವಯಸ್ಸು | : | 45 ವರ್ಷ |
| ಉದ್ಯೋಗ | : | ಏನೂ ಇಲ್ಲ |
| ವಾಸ | : | ಅಂಬಾಡಹಳ್ಳಿ ಗ್ರಾಮ. |

**ದಿನಾಂಕ 12.02.2026 ರಂದು ಸಾಕ್ಷಿಯನ್ನು ಕರೆಸಲಾಯಿತು. ಪ್ರಮಾಣವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆ: ಮಾನ್ಯ ಎಪಿಪಿ ಯವರಿಂದ:**

ಆರೋಪಿತರು ಗೊತ್ತಿಲ್ಲ. ಚಾಸಾ-**2** ನನ್ನ ಸ್ನೇಹಿತ, ಆರೋಪಿತರಿಗೂ ಮತ್ತು ನನಗೂ ಬಾಯಿಮಾತಿನ ಜಗಳ ಆಗಿರುತ್ತದೆ. ಆರೋಪಿತರು ನನಗೆ ಅವಾಚ್ಯ ಶಬ್ದದಿಂದ ನಿಂದಿಸಿಲ್ಲ, ನನ್ನ ಮೇಲೆ ಹಲ್ಲೆ ಮಾಡಿಲ್ಲ, ಪ್ರಾಣ ಬೆದರಿಕೆ ಹಾಕಿಲ್ಲ, ಈ ಬಗ್ಗೆ ನಾನು ಪೋಲಿಸರಿಗೆ ದೂರು ನೀಡಿರುತ್ತೇನೆ. ಸದರಿ ದೂರನ್ನು ನಿಪಿ-**1** ಎಂದು ಗುರುತಿಸಲಾಯಿತು, ಅದರಲ್ಲಿರುವ ನನ್ನ ಸಹಿಯನ್ನು ನಿಪಿ-**1**(ಎ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಸಂಪೂರ್ಣ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸ.ಸ.ಅ ರವರು ಅನುಮತಿ ಕೋರಿದ್ದಾರೆ, ಅನುಮತಿಸಲಾಯಿತು).**

**ಪಾಟೀ ಸವಾಲು: ಎಪಿಪಿಯವರಿಂದ:**

ದಿನಾಂಕ 21.02.2023 ರಂದು ರಾತ್ರಿ 8.00 ಗಂಟೆಯ ಸಮಯದಲ್ಲಿ ನಾನು ಮತ್ತು ಚಾಸಾ2 ರವರು 4ನೇ ಆರೋಪಿಯ ಮನೆಯ ಮುಂದೆ ನಡೆದುಕೊಂಡು ಹೋಗುತ್ತಿದ್ದಾಗ ಅದೇ ರಸ್ತೆಯಲ್ಲಿ 1ರಿಂದ 4ನೇ ಆರೋಪಿತರು ನನ್ನ ಮೇಲೆ ಮತ್ತು ಚಾಸಾ2 ರವರ ಮೇಲೆ ಜಗಳ ತೆಗೆದು, ಅವಾಚ್ಯ ಶಬ್ದದಿಂದ ಬೈದಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ನನಗೆ ಮತ್ತು ಚಾಸಾ2 ರವರಿಗೆ ಕುಡುಗೋಲಿನಿಂದ ಹಲ್ಲೆ ಮಾಡಿರುತ್ತಾರೆಂದರೆ ಸರಿಯಲ್ಲ. ಆರೋಪಿತರು ನನಗೂ

ಮತ್ತು ಚಾಸಾ2 ರವರಿಗೆ ನಮ್ಮ ವಿಚಾರಕ್ಕೆ ಬಂದರೆ ಒಂದು ಗತಿ ಕಾಣಿಸುತ್ತೇವೆಂದು ಪ್ರಾಣ ಬೆದರಿಕೆ ಹಾಕಿರುತ್ತಾರೆಂದರೆ ಸರಿಯಲ್ಲ. ಗಲಾಟೆಯಾದ ನಂತರ ಚಾಸಾ3,4 ರವರು ಸಮಾಧಾನ ಮಾಡಿ, ಜಗಳ ಬಿಡಿಸಿ, ನನ್ನನ್ನು ಆಸ್ಪತ್ರೆಗೆ ಕಳುಹಿಸಿರುತ್ತಾರೆಂದರೆ ಸರಿಯಲ್ಲ. ನಾನು ಈ ಘಟನೆಗೆ ಸಂಬಂದಪಟ್ಟಂತೆ ದಿಃ22.02.2023 ರಂದು ಆಸ್ಪತ್ರೆಯಲ್ಲಿ ಹೇಳಿಕೆ ದೂರು ನೀಡಿರುತ್ತೇನೆಂದರೆ ಸರಿಯಲ್ಲ.

ನಾನು ಆರೋಪಿತರ ಜೊತೆ ರಾಜಿ ಮಾಡಿಕೊಂಡಿರುವ ಕಾರಣ ನಿಪಿ-1 ರಂತೆ ದೂರು ನೀಡಿದ್ದರೂ ಸಹ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

**ಮರುವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ.ಹೇ.ಕೇ.ಸ.ಒ

**(ವೆಂಕಟೇಶಪ್ಪ. ವಿ)**
**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**